ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯದ ಕುರಿತು

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-

849 (957) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚಿಗೆ ರಾಜ್ಯದಾದ್ಯಂತ ಮತ್ತು ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ಹೆಚ್ಚಾಗಿ ಅಪಾಯಕಾರಿ ರಸಾಯನಿಕ ಲೋಹದ ಅಂಶಗಳು ಪ್ರಾಣಿ, ಪಕ್ಷಿಗಳು ಹಾಗೂ ಮಾನವನ ಕೂದಲಿನಲ್ಲಿ ಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹಸಿರುಮನೆ ಅನಿಲಗಳು (Green house Gases) ಜೊತೆಗೆ ಅಪಾಯಕಾರಿ ರಸಾಯನಿಕ ಲೋಹದ ಅಂಶಗಳು (ಉದಾ: ಸತು, ಪಾದರಸ) ವಾಯು ಮಾಲಿನ್ಯದಲ್ಲಿ ಹೆಚ್ಚಿರುವ ಬಗ್ಗೆ ಯಾವುದಾದರೂ ಸಂಸ್ಥೆ ಸರ್ಕಾರದ ಪರವಾಗಿ ಸಂಶೋಧನೆ ನಡೆಸಿದೆಯೇ ; ಸರ್ಕಾರ ಈ ಕುರಿತು ಕ್ರಮ ಕೈಗೊಳ್ಳಲು ಚಿಂತಿಸಿದೆಯೇ ; (ವಿವರ ನೀಡುವುದು)

(ಆ) ಇತ್ತೀಚಿಗೆ ದೆಹಲಿ ಮಹಾನಗರದಲ್ಲಿ ವಾಯು ಮಾಲಿನ್ಯ ಹೆಚ್ಚಾಗಿ ಅಲ್ಲಿನ ಜನರು ಕಷ್ಟ ಪಡುವ ರೀತಿಯಲ್ಲಿ ಮುಂದೊಂದು ದಿನ ಬೆಂಗಳೂರಿಗೆ ಬರುವ ಸಾಧ್ಯತೆಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ದಾಖಲಾದ ವಾಯು ಗುಣಮಟ್ಟದ ಸೂಚ್ಯಂಕದ (Air Quality Index) ಮಾಹಿತಿಯನ್ನು ವರ್ಷವಾರು ನೀಡುವುದು ?